ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಶಾಖೆ / ವಿಷಯ : DEPARTMENT / SUBJECT: L.A. ಶಾಸಕರ ಪ್ರಮಾಣ ವಚನ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 18/12/19

# 22ಕ್ಕೆ ನೂತನ ಶಾಸಕರ ಪ್ರಮಾಣ

ಸಂ.ಕ. ಸಮಾಚಾರ ಬೆಂಗಳೂರು:
ಇತ್ತೀಚೆಗೆ ರಾಜ್ಯದ 15 ಕ್ಷೇತ್ರಗಳಿಗೆ ನಡೆದ ಉಪ ಚುನಾವಣೆಯಲ್ಲಿ ಗೆಲುವು ಸಾಧಿಸಿರುವ ನೂತನ ಶಾಸಕರಿಗೆ ಡಿಸೆಂಬರ್ 22ರಂದು ಪ್ರಮಾಣ ವಚನ ಬೋಧಿಸಲಾಗುತ್ತಿದೆ.

ಅಂದು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಗೆಲುವು ಸಾಧಿಸಿದ ಎಲ್ಲಾ 15 ಮಂದಿ ಶಾಸಕರಾಗಿ ಪ್ರಮಾಣ ವಚನ ಸ್ವೀಕಾರ ಮಾಡಲಿದ್ದಾರೆ.

ಡಿಸೆಂಬರ್ 5ರಂದು ನಡೆದಿದ್ದ 15 ಕ್ಷೇತ್ರಗಳ ಉಪ ಚುನಾವಣೆಯಲ್ಲಿ 12 ಕ್ಷೇತ್ರಗಳಲ್ಲಿ ಬಿಜೆಪಿ, ಎರಡರಲ್ಲಿ ಕಾಂಗ್ರೆಸ್ ಹಾಗೂ ಒಂದು ಕ್ಷೇತ್ರದಲ್ಲಿ ಪಕ್ಷೇತರ ಅಭ್ಯರ್ಥಿ ಗೆಲುವು ಸಾಧಿಸಿದ್ದು, ನೂತನ ಶಾಸಕರಿಗೆ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಪ್ರಮಾಣ ವಚನ ಬೋಧಿಸಲಿದ್ದಾರೆ. ಈ ವೇಳೆ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಸೇರಿದಂತೆ ಸಚಿವರು, ಶಾಸಕರು, ಪ್ರತಿಪಕ್ಷ ನಾಯಕರು ಭಾಗಿಯಾಗಲಿದ್ದಾರೆ.

ಅನರ್ಹ ಶಾಸಕರು ಬಿಜೆಪಿ ಸೇರುವಾಗ ಅದ್ಧೂರಿಯಾಗಿ ಬರಮಾಡಿಕೊಂಡಿದ್ದ ಬಿಜೆಪಿ, ಇದೀಗ ಉಪ ಚುನಾವಣೆಯಲ್ಲಿ ಗೆದ್ದವರ ಪ್ರಮಾಣ ವಚನ ಸ್ವೀಕಾರಕ್ಕೂ ದೊಡ್ಡ ವೇದಿಕೆ ಕಲ್ಪಿಸುತ್ತಿದೆ. ಸಾಮಾನ್ಯವಾಗಿ ಸದನದಲ್ಲಿ ಅಥವಾ ಸ್ಪೀಕರ್ ಕಚೇರಿಯಲ್ಲಿ ನಡೆಯಬೇಕಿದ್ದ ಕಾರ್ಯಕ್ರಮವನ್ನು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಮಾಡುವ ಮೂಲಕ ಗೆದ್ದವರ ಪ್ರಮಾಣ ವಚನ ಸ್ವೀಕಾರಕ್ಕೆ ದೊಡ್ಡಮಟ್ಟದ ವೇದಿಕೆ ಸಿದ್ಧಪಡಿಸಲಾಗುತ್ತಿದೆ.